# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: | 523 |
| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು: | ಶ್ರೀ ಎಸ್.ವ್ಹಿ.ಸಂಕನೂರ (ಪದವೀಧರರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ: | 10-07-2023. |
| ಉತ್ತರಿಸುವ ಸಚಿವರು: | ಮಾನ್ಯ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವೈದ್ಯಕೀಯ ಶಿಕ್ಷಣ ಇಲಾಖೆಯ ಸ್ವಾಯತ್ತ ಸಂಸ್ಥೆಯ ಖಾಯಂ ನೌಕರರಿಗೆ ವೈದ್ಯಕೀಯ ವೆಚ್ಚವನ್ನು ಭರಿಸಲು ಮುಂಗಡ ಹಣವನ್ನು ನೀಡುತ್ತಿಲ್ಲದಿರುವುದು ನಿಜವೇ. | ಹೌದು.<br>ವೈದ್ಯಕೀಯ ಶಿಕ್ಷಣ ಇಲಾಖೆಯ ಸ್ವಾಯತ್ತ ಸಂಸ್ಥೆಯ ಖಾಯಂ ನೌಕರರಿಗೆ ವೈದ್ಯಕೀಯ ವೆಚ್ಚವನ್ನು ಭರಿಸಲು ಮುಂಗಡ ಹಣ ನೀಡಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |
| ಆ) | ಖಾಯಂ ನೌಕರರು ವೈದ್ಯಕೀಯ ವೆಚ್ಚವನ್ನು ಸ್ವಂತ ವೆಚ್ಚದಲ್ಲಿ ಭರಿಸಿದಾಗ ವರ್ಷಗಳು ಕಳೆದರೂ ಮರುಪಾವತಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಖಾಯಂ ನೌಕರು ವೈದ್ಯಕೀಯ ವೆಚ್ಚವನ್ನು ಸ್ವಂತ ವೆಚ್ಚದಲ್ಲಿ ಭರಿಸಿದಾಗ, ಅಂತಹ ಪ್ರಕರಣಗಳಲ್ಲಿ ಅವರಿಗೆ ಪಾವತಿಸಬಹುದಾದ ಅರ್ಹ ಮೊತ್ತದ ಬಗ್ಗೆ ಪ್ರಸ್ತಾವನೆಯನ್ನು Medical Attendance Rulesನ ಪ್ರಕಾರ ವೈದ್ಯಕೀಯ ಮಂಡಳಿಯ ಪರಿಶೀಲನೆಗಾಗಿ ಕಳುಹಿಸಿ ಮಂಡಳಿಯು ನೀಡುವ ಅಭಿಪ್ರಾಯದ ಮೇರೆಗೆ ಅರ್ಹ ಮೊತ್ತವನ್ನು ಪಾವತಿ ಮಾಡಲಾಗಿದ್ದು, ಇಂತಹ ಕೆಲವೊಂದು ಪ್ರಕರಣಗಳಲ್ಲಿ ಮಾತ್ರ ವೈದ್ಯಕೀಯ ವೆಚ್ಚವನ್ನು ಹಿಂಬರಿಸಲು ವಿಳಂಬವಾಗಿರುತ್ತದೆ. |
| ಇ) | ವೈದ್ಯಕೀಯ ಶಿಕ್ಷಣ ಇಲಾಖೆಯ ಅಡಿಯಲ್ಲಿರುವ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ ಉಚಿತ ಆರೋಗ್ಯ ಸೌಲಭ್ಯವನ್ನು ವಿಸ್ತರಿಸಲು ಶೀಘ್ರವಾಗಿ ಪರಿಶೀಲನೆ ಮಾಡಲು ಮಾನ್ಯ ಉಚ್ಛ ನ್ಯಾಯಾಲಯವು W.P.No.9117/2020ರಲ್ಲಿ ತೀರ್ಪು ನೀಡಿದ್ದರೂ ಸಹ ಇದುವರೆಗೂ ಜಾರಿಯಾಗದಿರಲು ಕಾರಣವೇನು? (ಸಂಪೂರ್ಣ ಮಾಹಿತಿ ನೀಡುವುದು) | ವೈದ್ಯಕೀಯ ಶಿಕ್ಷಣ ಇಲಾಖೆಯಡಿಯಲ್ಲಿರುವ ಆಸ್ಪತ್ರೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ನೌಕರರಿಗೆ ಉಚಿತ ಆರೋಗ್ಯ ಸೌಲಭ್ಯವನ್ನು ವಿಸ್ತರಿಸಲು ಶೀಘ್ರವಾಗಿ ಪರಿಶೀಲನೆ ಮಾಡಲು ಮಾನ್ಯ ಉಚ್ಛ ನ್ಯಾಯಾಲಯವು W.P.No.9117ರಲ್ಲಿ ನೀಡಿರುವ ತೀರ್ಪಿನ ಮೇರೆಗೆ ಈ ಬಗ್ಗೆ ಪರಿಶೀಲನೆಗಾಗಿ ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು ಇವರ ಅಧ್ಯಕ್ಷತೆಯಲ್ಲಿ ತಾಂತ್ರಿಕ ಸಮಿತಿಯನ್ನು ರಚಿಸಲಾಗಿರುತ್ತದೆ. ಸದರಿ ಸಮಿತಿಯು ಪ್ರಸ್ತಾಪಿತ ವಿಷಯದ ಬಗ್ಗೆ ದಿನಾಂಕ:08.11.2021ರಂದು ನಡೆಸಿರುವ ಸಭಾ ನಡವಳಿಯಲ್ಲಿನ ಶಿಫಾರಸ್ಸಿನ ಮೇರೆಗೆ ವೈದ್ಯಕೀಯ ಶಿಕ್ಷಣ ಇಲಾಖೆಯ ಆಡಳಿತಾತ್ಮಕ ನಿಯಂತ್ರಣದಲ್ಲಿರುವ ಸ್ವಾಯತ್ತ ಸಂಸ್ಥೆಗಳ ಉದ್ಯೋಗಿಗಳಿಗೆ ನಗದು ರಹಿತ ಆರೋಗ್ಯ ಯೋಜನೆಯ ಪ್ರಯೋಜನವನ್ನು ವಿಸ್ತರಿಸುವ ಬಗ್ಗೆ ಆರ್ಥಿಕ ಇಲಾಖೆಯ ಅಭಿಪ್ರಾಯವನ್ನು ಕೋರಲಾಗಿತ್ತು. |

| | | |
|---|---|---|
| | | ಆದರೆ, ಆರ್ಥಿಕ ಇಲಾಖೆಯು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಲ್ಲಿ ರಾಜ್ಯ ಸರ್ಕಾರಿ ನೌಕರರಿಗಾಗಿ ಆರೋಗ್ಯ ಸಂಜೀವಿನಿ ಯೋಜನೆಯನ್ನು ರೂಪಿಸುವ ಪ್ರಕ್ರಿಯೆ ಜಾರಿಯಲ್ಲಿರುವುದಾಗಿ ತಿಳಿಸಿರುವುದರಿಂದ, ವೈದ್ಯಕೀಯ ಶಿಕ್ಷಣ ಇಲಾಖೆಯು ತನ್ನ ಅಧೀನದಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ನೌಕರರಿಗಾಗಿ ಅದೇ ಮಾದರಿಯ ಯೋಜನೆಯನ್ನು ರೂಪಿಸಲು ಉದ್ದೇಶಿಸಿದಲ್ಲಿ ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಅಂತಿಮಗೊಳಿಸಿದ ನಂತರ ಸಿಆಸು ಇಲಾಖೆಯೊಂದಿಗೆ ಸಮಾಲೋಚಿಸಿ ನಂತರ ಆರ್ಥಿಕ ಇಲಾಖೆಯನ್ನು ಸಮಾಲೋಚಿಸಲು ತಿಳಿಸಿರುತ್ತದೆ.<br><br>ಅದರಂತೆ, ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೀಡುತ್ತಿರುವ ನೂತನ **"ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ(KASS)"**ಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಎಲ್ಲಾ ವೃಂದದ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ಅನುಷ್ಠಾನಗೊಳಿಸುವ ಕುರಿತು ಸಿಆಸು ಇಲಾಖೆ ಅಭಿಪ್ರಾಯ ಕೋರಲಾಗಿರುತ್ತದೆ.<br><br>ಈ ಬಗ್ಗೆ ಸಿಆಸು ಇಲಾಖೆಯ ಟಿಪ್ಪಣಿ ಸಂಖ್ಯೆ: DPAR/151/MPS/2023, ದಿನಾಂಕ:27.06.2023ರಂದು ನೀಡಿರುವ ಹಿಂಬರಹದಲ್ಲಿ, ಸರ್ಕಾರದ ಆದೇಶ ಸಂಖ್ಯೆ:ಸಿಆಸುಇ 16 ಎಸ್‌ಎಂಆರ್ 2020 (ಭಾಗ-5), ದಿನಾಂಕ:09.03.2023ರಲ್ಲಿ ಸದರಿ ಯೋಜನೆಗೆ ಒಳಪಡದ ನೌಕರ ವರ್ಗದಲ್ಲಿ ಸ್ವಾಯತ್ತ ಸಂಸ್ಥೆಗಳ ನೌಕರರು ಸಹ ಒಳಗೊಂಡಿರುತ್ತಾರೆ ಎಂಬುದನ್ನು ಸ್ಪಷ್ಟಪಡಿಸಲಾಗಿದೆ. ಅಲ್ಲದೇ, ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ:ಸಿಆಸುಇ 19 ಸೇಇವಿ 2021, ದಿನಾಂಕ:28.06.2021ರಲ್ಲಿ ರಾಜ್ಯ ಸರ್ಕಾರವು ಸ್ಥಾಪಿಸಿರುವ ನಿಗಮ, ಮಂಡಳಿ, ಕಂಪನಿ, ಸ್ಥಳೀಯ ಸಂಸ್ಥೆ, ವಿಶ್ವವಿದ್ಯಾಲಯ ಇತ್ಯಾದಿ ಸ್ವಾಯತ್ತ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತುಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನಿಯಮ/ವಿನಿಯಮಗಳನ್ನು ರಚಿಸುವ ಬಗ್ಗೆ ವಿವರವಾದ ಸೂಚನೆಗಳನ್ನು ನೀಡಲಾಗಿದ್ದು, ಸದರಿ ಅಂಶಗಳನ್ನು ಗಮನದಲ್ಲಿ ಇರಿಸಿಕೊಂಡು ಆಡಳಿತ ಇಲಾಖೆಯೇ ಸೂಕ್ತ ಕ್ರಮವಹಿಸಬಹುದಾಗಿದೆ ಎಂದು ತಿಳಿಸಿರುತ್ತದೆ.<br>ಆದುದರಿಂದ, ಸಿಆಸು ಇಲಾಖೆಯು ನೀಡಿರುವ ಮೇಲ್ಕಂಡ ಅಭಿಪ್ರಾಯದ ಹಿನ್ನೆಲೆಯಲ್ಲಿ, ಸರ್ಕಾರದ ಅಧಿಕೃತ ಜ್ಞಾಪನ |

| | | |
|---|---|---|
| | | ಸಂಖ್ಯೆ:ಸಿಆಸುಇ 19 ಸೇಇವಿ 2021, ದಿನಾಂಕ:28.06.2021 ರಲ್ಲಿ ನೀಡಿರುವ ಸೂಚನೆಗಳ ಆಧಾರದ ಮೇಲೆ ರಾಜ್ಯ ಸರ್ಕಾರಿ ನೌಕರರಿಗೆ ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ನೀಡುತ್ತಿರುವ ನೂತನ **"ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆ(KASS)"**ಯನ್ನು ವೈದ್ಯಕೀಯ ಶಿಕ್ಷಣ ಇಲಾಖೆಯ ಅಧೀನದಲ್ಲಿ ಬರುವ ಸ್ವಾಯತ್ತ ಸಂಸ್ಥೆಗಳ ಎಲ್ಲಾ ವೃಂದದ ನೌಕರರಿಗೆ ಹಾಗೂ ಅವರ ಅವಲಂಬಿತರಿಗೆ ಅನುಷ್ಠಾನಗೊಳಿಸುವ ಕುರಿತು ಪ್ರತ್ಯೇಕ ನಿಯಮ/ವಿನಿಯಮಗಳನ್ನು ರಚಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

**ಸಂಖ್ಯೆ:ಎಂಇಡಿ 81 ಆರ್‌ಐ 2023**

**(ಡಾ:ಶರಣ ಪ್ರಕಾಶ ಆರ್ ಪಾಟೀಲ)**
ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು
ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ
ಜೀವನೋಪಾಯ ಸಚಿವರು